ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	833 (957)
ಮಾನ್ಯ ಸದಸ್ಯರ ಹೆಸರು	:	ಶ್ರೀ ಪಿ.ಆರ್.ರಮೇಶ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	:	20.09.2021
ಉತ್ತರಿಸುವ ಸಚಿವರು	:	ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು

ಪ್ರ ಸಂ	ಪ್ರಶ್ನೆ	ಉತ್ತರ
ಅ)	ಕಳೆದ 5 ವರ್ಷಗಳಿಂದ ಸರ್ಕಾರದಿಂದ ರಾಜ್ಯದಲ್ಲಿ ಯಾವುದಾದರೂ ಪಾಲಿಟೆಕ್ನಿಕ್ ಸಂಸ್ಥೆಗಳನ್ನು ಸರ್ಕಾರದ ವೇತನನುದಾನಕ್ಕೆ ಒಳಪಡಿಸಲಾಗಿದೆಯೇ; (ವಿವರ ನೀಡುವುದು)	ಶ್ರೀ ಗುರುಮಲ್ಲೇಶ್ವರ ಪಾಲಿಟೆಕ್ನಿಕ್, ದೇವನೂರು ಗ್ರಾಮ, ನಂಜನಗೂಡು ತಾಲ್ಲೂಕು ಈ ಖಾಸಗಿ ಅನುದಾನ ರಹಿತ ಪಾಲಿಟೆಕ್ನಿಕ್ ಸಂಸ್ಥೆಯನ್ನು ಸರ್ಕಾರದ ಆದೇಶ ಸಂಖ್ಯೆ:ಇಡಿ 08 ಟಿಪಿಇ 2017, ದಿನಾಂಕ:26.03.2018ರಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ ಕೆಲವು ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಿ ಸರ್ಕಾರ ವೇತನಾನುದಾನಕ್ಕೆ ಒಳಪಡಿಸಿ ಆದೇಶಿಸಲಾಗಿದೆ.
ಆ)	ಮುಂಬರುವ ದಿನಗಳಲ್ಲಿ ಸರ್ಕಾರದಿಂದ ರಾಜ್ಯದಲ್ಲಿ ಯಾವುದಾದರೂ ಪಾಲಿಟೆಕ್ನಿಕ್ ಸಂಸ್ಥೆಗಳನ್ನು ಸರ್ಕಾರದ ವೇತನಾನುದಾನಕ್ಕೆ ಒಳಪಡಿಸಲು ಚಿಂತನೆ ನಡೆಸಲಾಗಿದೆಯೇ; (ವಿವರ ನೀಡುವುದು)	ಪ್ರಸ್ತುತ ರಾಜ್ಯದಲ್ಲಿ 82 ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳು ಮತ್ತು 44 ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿವೆ. 2018-19ನೇ ಸಾಲಿನ ಆಯವ್ಯಯದಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಿಗೆ ರೂ.439.00 ಕೋಟಿಗಳನ್ನು ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ರೂ.377.00 ಕೋಟಿಗಳನ್ನು (ರೂ.377.00ಕೋಟಿ + ರೂ.439.00ಕೋಟಿ = ರೂ.816.00ಕೋಟಿ) ಒದಗಿಸಲಾಗಿದೆ. ಉನ್ನತ ಶಿಕ್ಷಣ ವಲಯದಲ್ಲಿ ಈಗಾಗಲೇ ಪ್ರಾರಂಭಿಸಿರುವ ಕಾಲೇಜುಗಳಿಗೆ ಮತ್ತು ಪಾಲಿಟೆಕ್ನಿಕ್‌ಗಳಿಗೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸಂಪನ್ಮೂಲದ ಕೊರತೆ ಇರುವುದರಿಂದ ಹಾಗೂ ಯು.ಜಿ.ಸಿ, ಎಐಸಿಟಿಇ ಮತ್ತು 6ನೇ ರಾಜ್ಯ ವೇತನ ಪರಿಷ್ಕರಣೆಯಿಂದ ಸರ್ಕಾರಕ್ಕೆ ಹೆಚ್ಚಿನ ಆರ್ಥಿಕ ಹೊರೆ
ಇ)	ಸದರಿ ಸರ್ಕಾರದ ವೇತನಾನುದಾನಕ್ಕೆ ಸಂಬಂಧಿಸಿದಂತೆ, ಸರ್ಕಾರದಿಂದ ನಿಗದಿತ ಗುರಿಯನ್ನು ಹೊಂದಿದೆಯೇ; (ವಿವರ ನೀಡುವುದು)	

		ಈಗಾಗಲೇ ಉಂಟಾಗಿರುವ ಹಿನ್ನೆಲೆಯಲ್ಲಿ, ಸರ್ಕಾರವು ತನ್ನ ಸಂಸ್ಥೆಗಳನ್ನು ಬಲಪಡಿಸಲು ಅಗತ್ಯ ಅನುದಾನವನ್ನು ನೀಡಲು ಮೊದಲ ಆದ್ಯತೆ ನೀಡಬೇಕಾಗಿರುವುದರಿಂದ 1987ರ ಪೂರ್ವದಲ್ಲಿ ಪ್ರಾರಂಭಿಸಲಾದ 33 ಖಾಸಗಿ ಪಾಲಿಟೆಕ್ನಿಕ್‌ಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯನ್ನು ಸದ್ಯಕ್ಕೆ ಕೈಬಿಡಲಾಗಿದೆ.

ಇಡಿ 68 ಟಿಪಿಇ 2021

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು